ಸಮೀಕ್ಷೆ ಕಾರ್ಯದ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ. ಆದರೂ ಈಗ ಸರ್ಕಾರವು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಎಫ್‌ಸಿಎಸ್ 20 ಡಿಆರ್‌ಎ 97 ದಿನಾಂಕ 15-4-98 ಅನುಸಾರ ಹೊಸ ಕಾರ್ಡುಗಳಿಗಾಗಿ ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ಅರ್ಜಿದಾರರಿಗೆ ಪಡಿತರ ಚೀಟಿಗಳನ್ನು ನೀಡಲಾಗುವುದು.

ವಿಷಯ: ರಾಜ್ಯದಲ್ಲಿರುವ ಸಣ್ಣ ಹಾಗೂ ದೊಡ್ಡ ಕೆರೆಗಳ ಅಭಿವೃದ್ಧಿ.

884 (1385)

ಶ್ರೀ ಕುಂಬ್ಳೆ ಸುಂದರ್‌ರಾವ್ (ಸುರತ್ಕಲ್): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ಮತ್ತು ದೊಡ್ಡ ಕೆರೆಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ, ಹಾಗಿದ್ದಲ್ಲಿ ಒಟ್ಟು ಕೆರೆಗಳ ಸಂಖ್ಯೆ ಎಷ್ಟು?

ಆ) ಸಮಸ್ಯೆಯಾಗಿ ವೃದ್ಧಿಸುತ್ತಿರುವ ಕುಡಿಯುವ ನೀರು ಹಾಗೂ ಕೃಷಿಗಾಗಿ ನೀರು ಪೂರೈಕೆಯ ಅಕ್ಷಯ ಪಾತ್ರೆಗಳಂತಿದ್ದ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರದವರು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ಹೌದು. ಸಣ್ಣ ಮತ್ತು ದೊಡ್ಡ ಕೆರೆಗಳು ಒಟ್ಟು 36679.

ಆ) ಕೆರೆ ಕಲ್ಯಾಣ ಮತ್ತು ಕೆರೆಗಳ ಪುನರುಜ್ಜೀವನ ಶೀರ್ಷಿಕೆಯಲ್ಲಿ ಕೆರೆಗಳ ಅಭಿವೃದ್ಧಿಯನ್ನು ಪ್ರತಿ ವರ್ಷವು ಹಮ್ಮಿಕೊಳ್ಳಲಾಗಿದೆ.

ವಿಷಯ: ಸಚಿವಾಲಯದ ಸಿಬ್ಬಂದಿಗಳನ್ನು ವಿವಿಧ ಇಲಾಖೆಗಳಿಗೆ ನಿಯೋಜಿಸುವುದು.

885 (1493)

ಡಾ. ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಚಿವಾಲಯದ ಸಿಬ್ಬಂದಿಗಳನ್ನು ಸರ್ಕಾರದ ಇತರೆ ಇಲಾಖೆಗಳಿಗೆ ವರ್ಗಾಯಿಸಲು ಸರ್ಕಾರದವರು ಪರಿಶೀಲಿಸುವರೆ?

ಆ) ವರ್ಗಾಯಿಸದಿದ್ದಲ್ಲಿ ಕಾರಣಗಳೇನು?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯ ಮಂತ್ರಿಗಳು):

ಅ) ಈಗಾಗಲೇ ಸಚಿವಾಲಯದ ಸಿಬ್ಬಂದಿಗಳನ್ನು ಸರ್ಕಾರದ ವಿವಿಧ ಇಲಾಖೆಗಳಿಗೆ ನಿಯೋಜನೆ ಮೇಲೆ ಕಳಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ವಿಷಯ: ಲೋಕಸೇವಾ ಆಯೋಗದ ಪರೀಕ್ಷೆಗಳು.

886 (1494)

ಡಾ: ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಲೋಕಸೇವಾ ಆಯೋಗದಿಂದ ಪ್ರಥಮ ದರ್ಜೆ ಸಹಾಯಕ, ದ್ವಿತೀಯ ದರ್ಜೆ ಸಹಾಯಕ ನೌಕರರ ಆಯ್ಕೆಗಾಗಿ ಪರೀಕ್ಷೆಗಳನ್ನು ಎಂದು ನಡೆಸಲಾಯಿತು ಹಾಗೂ ಎಂದು ನಡೆಸಲಾಗುವುದು?

ಆ) ಈ ಪ್ರಕಾರ್ಯಗಳು ಎಂದು ಮುಗಿಯುತ್ತದೆ?

ಇ) ಇವರ ನೇಮಕಾತಿಗಳನ್ನು ಸರ್ಕಾರ ಎಂದು ಮಾಡಲು ಉದ್ದೇಶಿಸಿದೆ?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯಮಂತ್ರಿಗಳು):

ಅ) ಪ್ರಥಮ ದರ್ಜೆ ಸಹಾಯಕ: ಸಹಾಯಕರ ಪರೀಕ್ಷೆಯನ್ನು ದಿನಾಂಕ 2-11-1997ರಂದು ನಡೆಸಲಾಯಿತು. ಎರಡನೇ ದರ್ಜೆ ಸಹಾಯಕರ ಪರೀಕ್ಷೆಯನ್ನು ದಿನಾಂಕ 10-5-98ರಂದು ನಡೆಸಲಾಗುವುದು.

ಆ) ಪ್ರಥಮ ದರ್ಜೆ ಸಹಾಯಕರು: ಸಹಾಯಕರ ಹುದ್ದೆಗಳಿಗೆ ನಡೆಸಲಾದ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ 1:2 ಪ್ರಮಾಣದಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳಿಂದ ದಾಖಲೆಗಳನ್ನು ಪಡೆಯಲಾಗುತ್ತಿದೆ. ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ದಗೊಳಿಸಿ ಆದಷ್ಟು ಬೇಗನೆ ಪ್ರಕಟಿಸುವ ಕ್ರಮ ಆಯೋಗ ಕೈಗೊಳ್ಳುವುದು.

ಆ) ಆಯ್ಕೆಯನ್ನು ಪೂರ್ಣಗೊಳಿಸಿದ ನಂತರ, ಆಯಾ ಇಲಾಖೆಗಳ ನೇಮಕಾತಿ ಪ್ರಾಧಿಕಾರಗಳಿಗೆ ಆಯ್ಕೆ ಪಟ್ಟಿಗಳನ್ನು ಕಳುಹಿಸುತ್ತದೆ. ನಿಗದಿತ ನೇಮಕಾತಿ ಪ್ರಕ್ರಿಯೆಯನ್ನು ಪೂರೈಸಿದ ನಂತರ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಿಗಳು ನೇಮಕಾತಿ ಮಾಡುವರು.